# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2019-20ನೇ ಸಾಲಿಗೆ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮ ಯೋಜನೆ 2ನೇ ಹಂತದ ಕಾಮಗಾರಿಗಳಿಗೆ 4ಜಿ ವಿನಾಯಿತಿ ನೀಡುವ ಕುರಿತು.

ಓದಲಾಗಿದೆ :
1. ED, MGIRED ರವರ ಪತ್ರ ಸಂಖ್ಯೆ MGI/RTP /63/2015-16, ದಿನಾಂಕ 14.05.2019
2. ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ ಆಇ/384/ವೆಚ್ಚ-06/2019, ದಿನಾಂಕ 22.08.2019.

**ಪ್ರಸ್ತಾವನೆ :**

ಮೇಲೆ ಓದಲಾದ (1)ರಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, MGIRED ರವರ ಕೋರಿಕೆಯನ್ವಯ ಓದಲಾದ (2) ರಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿದಂತೆ ರೂ.499.52ಲಕ್ಷಗಳ ವೆಚ್ಚದಲ್ಲಿ 2ನೇ ಹಂತದ ಮಾದರಿ ಪಾರಂಪರಿಕ ಗ್ರಾಮ ಯೋಜನೆ ನಿರ್ಮಾಣ ಮಾಡಲು ಶ್ರೀ ಟಿ.ಬಿ. ಸೊಲಬಕ್ಕನವರ್, ಮೆ: ಶಿಲ್ಪ ಕಲಾ ಕುಟೀರ ಹಾವೇರಿ ರವರ ಸೇವೆಯನ್ನು ನೇರವಾಗಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಆಡಳಿತ ಇಲಾಖೆಗೆ ಪ್ರದತ್ತವಾದ ಅಧಿಕಾರದನ್ವಯ ವಿನಾಯಿತಿ ನೀಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/26/ಜೈಅಯೋ/2019 ಬೆಂಗಳೂರು, ದಿನಾಂಕ.26.08.2019.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ **2019-20**ನೇ ಸಾಲಿಗೆ ಸಂಬಂಧಿಸಿದಂತೆ ಮೇಲೆ ಓದಲಾದ (1)ರಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿದಂತೆ ರೂ.499.52ಲಕ್ಷಗಳ ವೆಚ್ಚದಲ್ಲಿ 2ನೇ ಹಂತದ ಮಾದರಿ ಪಾರಂಪರಿಕ ಗ್ರಾಮ ಯೋಜನೆ ನಿರ್ಮಾಣ ಮಾಡಲು ಶ್ರೀ ಟಿ.ಬಿ. ಸೊಲಬಕ್ಕನವರ್, ಮೆ: ಶಿಲ್ಪ ಕಲಾ ಕುಟೀರ ಹಾವೇರಿ ರವರ ಸೇವೆಯನ್ನು ನೇರವಾಗಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಆಡಳಿತ ಇಲಾಖೆಗೆ ಪ್ರದತ್ತವಾದ ಅಧಿಕಾರದನ್ವಯ ವಿನಾಯಿತಿ ನೀಡಿ ಆದೇಶಿಸಿದೆ ಹಾಗೂ ನಿಯಮಾನುಸಾರ ಪರಿಶೀಲಿಸಿ ಮುಂದಿನ ಕ್ರಮ ಕೈಗೊಂಡು ಪ್ರತಿ ಹಂತವಾರು ಪ್ರಗತಿ ವರದಿಯನ್ನು ಸರ್ಕಾರಕ್ಕೆ ನೀಡುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ರೇವಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪಂ ರಾಜ್ ಇಲಾಖೆ.
2. ಇಲಾಖಾ ಗಣಕ ಕೇಂದ್ರ, ಗ್ರಾಅಪಂ.ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಸಂಖ್ಯೆ:ಆಇ 731 ವೆಚ್ಚ-12/19

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:21.08.2019

## ಅಧಿಸೂಚನೆ

ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ (MGIRED) ಯಿಂದ 2ನೇ ಹಂತದ ಮಾದರಿ ಪಾರಂಪರಿಕ ಗ್ರಾಮ ನಿರ್ಮಾಣ ಮಾಡಲು ರೂ.499.52 ಲಕ್ಷಗಳ ವೆಚ್ಚದಲ್ಲಿ ಶ್ರೀ ಟಿ.ಬಿ.ಸೊಲಬಕ್ಕನವರ, ಮೆ:ಶಿಲ್ಪ ಕಲಾ ಕುಟೀರರವರ ಸೇವೆಯನ್ನು ನೇರವಾಗಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ಎನ್. ಕೃಷ್ಣಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

ಇವರಿಗೆ:

ಜಂಟಿ ನಿರ್ದೇಶಕರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-59, ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ 25 ಮುದ್ರಿತ ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:

1) ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ. ವಿಕಾಸಸೌಧ, ಬೆಂಗಳೂರು - 10 ಪ್ರತಿಗಳು.
4) ಹೆಚ್ಚುವರಿ ಪ್ರತಿ.